# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1567 |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19.12.2025. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಪರಿಷ್ಕೃತ ನಿಯಮಗಳಂತೆ ನಮೂನೆ 9/11 ನೀಡುವಲ್ಲಿ ಉದ್ಭವಿಸಿರುವ ಸಮಸ್ಯೆಗಳು ಇಲಾಖೆಯ ಗಮನಕ್ಕೆ ಬಂದಿದೆಯೇ; ಅದರಲ್ಲೂ ದಕ್ಷಿಣ ಕನ್ನಡ/ ಉಡುಪಿ ಜಿಲ್ಲೆಗಳಲ್ಲಿ ನಮೂನೆ 9/11 ಪಡೆಯುವಲ್ಲಿ ತೊಂದರೆಯಾಗಲು ಕಾರಣವೇನು: | ಬಂದಿದೆ.<br>ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ನ್ನು ಅಧಿಸೂಚಿಸಲಾಗಿದ್ದು, ಇ-ಸ್ವತ್ತು 2.0 ತಂತ್ರಾಂಶವನ್ನು ದಿನಾಂಕ: 01.12.2025 ರಂದು ಚಾಲನೆಗೊಳಿಸಲಾಗಿರುತ್ತದೆ. |
| (ಆ) | ನಿವೇಶನ ಬಡಾವಣೆ ಅನುಮೋದನೆಯನ್ನು ನಗರಾಭಿವೃದ್ಧಿ ಇಲಾಖೆಯ ಬದಲು ಈ ಮೊದಲಿನಂತೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನೀಡುವಂತೆ ಕ್ರಮವಹಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು: ನಮೂನೆ 9/11 ಪಡೆಯುವಲ್ಲಿರುವ ತೊಂದರೆಯನ್ನು ನಿವಾರಿಸುವ ನಿಟ್ಟಿನಲ್ಲಿ ಪರಿಣತರ ಸಮಿತಿ ಮಾಡಿ ಪಂಚಾಯಿತಿ ಮಟ್ಟದಲ್ಲೇ ಅನುಮೋದನೆ ನೀಡಲು ಇಲಾಖೆ ಯಾವಾಗ ಕ್ರಮವಹಿಸುತ್ತದೆ: | ನಿವೇಶನ ಬಡಾವಣೆ ಅನುಮೋದನೆಯನ್ನು ನಗರಾಭಿವೃದ್ಧಿ ಇಲಾಖೆಯ ಬದಲು ಮೊದಲಿನಂತೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನೀಡುವಂತೆ ಕ್ರಮ ವಹಿಸುವ ಬಗ್ಗೆ ನಗರಾಭಿವೃದ್ಧಿ ಇಲಾಖೆಯು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ಕ್ಕೆ ತಿದ್ದುಪಡಿ ತರಬೇಕಾಗಿರುತ್ತದೆ. |
| (ಇ) | ಕರ್ನಾಟಕ ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಪರಿಷ್ಕೃತ ಪರವಾನಿಗೆ ನಿಯಮಗಳಂತೆ ಆಸ್ತಿ ಸಂಬಂಧಿತ ಸೇವೆಗಳಿಗೆ ನಮೂನೆ 9/11 ಕಡ್ಡಾಯವಾಗಿ ಮಾಡಿದ್ದು ಈ ಎಲ್ಲಾ ಸೇವೆಗಳು ಸ್ಥಗಿತವಾಗಿರುವುದು ಗಮನಕ್ಕೆ ಬಂದಿದೆಯೇ: ಪರಿಷ್ಕೃತ ನಿಯಮಗಳು ಜಾರಿ ನಂತರ ಎಷ್ಟು ನಮೂನೆ 9/11 & ಇತರ ಆಸ್ತಿ ಸಂಬಂಧಿತ ಸೇವೆಗಳು ನೀಡಲ್ಪಟ್ಟಿವೆ: ಪ್ರಾಯೋಗಿಕವಾಗಿ ಪಾಲಿಸಲು ಸಾಧ್ಯವಾಗದ ನಿಯಮಗಳು ಕಾರಣ ಆಸ್ತಿ ಸಂಬಂಧಿತ ಸೇವೆಗಳು ಕಡಿಮೆಯಾಗಿದ್ದನ್ನು ಸುಧಾರಿಸಲು ಇಲಾಖೆ ಯಾವ ಕ್ರಮವಹಿಸಿದೆ: | 1. ಇ-ಸ್ವತ್ತು 2.0 ತಂತ್ರಾಂಶವನ್ನು ಅನುಷ್ಠಾನ ಗೊಳಿಸಿದ ನಂತರ ಈವರೆಗೆ 2936 ಅರ್ಜಿಗಳು ಸ್ವೀಕೃತವಾಗಿವೆ.<br>2. ಇ-ಸ್ವತ್ತು 2.0 ತಂತ್ರಾಂಶದ ಮೂಲಕ ಸಾರ್ವಜನಿಕರಿಂದ ಆನ್-ಲೈನ್ ನಲ್ಲಿ ಸ್ವೀಕೃತವಾದ ಅರ್ಜಿಗಳನ್ನು ವಿಲೇವಾರಿ ಮಾಡಲು ಉಂಟಾಗುತ್ತಿರುವ ತಾಂತ್ರಿಕ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಲು ಕ್ರಮ ವಹಿಸಲಾಗುತ್ತಿದೆ.<br>3. ಇ-ಸ್ವತ್ತು 2.0 ತಂತ್ರಾಂಶವನ್ನು ಅನುಷ್ಠಾನಗೊಳಿಸಿದ ನಂತರ ಸಾರ್ವಜನಿಕರು ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸುವಾಗ ಉಂಟಾದ ತಾಂತ್ರಿಕ ಸಮಸ್ಯೆಗಳಾದ ಋಣಭಾರ ಪ್ರಮಾಣ ಪತ್ರಗಳ ವಿವರಗಳನ್ನು ಆಸ್ತಿ ಮಾಲೀಕರ ವಿದ್ಯುತ್ ಬಿಲ್ಲನ್ನು fetch ಮಾಡಲು, ದಾಖಲೆಗಳನ್ನು upload ಮಾಡಲು ಉಂಟಾದಂತಹ ಸಮಸ್ಯೆ ಹಾಗೂ ಇತರೆ ಸಮಸ್ಯೆಗಳನ್ನು ಬಗೆಹರಿಸಲಾಗಿದೆ. |

| | | |
|---|---|---|
| | | 4. ಇ-ಸ್ವತ್ತು (eswathu.karnataka.gov.in) ತಂತ್ರಾಂಶದ ಹೊಸ ಅವತರಣಿಕೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಹೊಸ ವ್ಯವಸ್ಥೆಯ ಆರಂಭಿಕ ದಿನಗಳಲ್ಲಿ, ಇ-ಸ್ವತ್ತು ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ ಹಾಗೂ ಇ-ಸ್ವತ್ತು ಪ್ರಮಾಣ ಪತ್ರಗಳು (ನಮೂನೆ-11ಎ ಮತ್ತು ನಮೂನೆ- 11ಬಿ) ಪಡೆಯುವಾಗ ಕೆಲವು ತಾಂತ್ರಿಕ ತೊಂದರೆಗಳು ಎದುರಾಗುವ ಸಾಧ್ಯತೆ ಇದೆ. ತಂತ್ರಾಂಶದಲ್ಲಿ ಕಾಣಿಸಿಕೊಳ್ಳುವ ಎಲ್ಲಾ ತಾಂತ್ರಿಕ ಸಮಸ್ಯೆಗಳನ್ನು ಪರಿಹರಿಸಲು ಇಲಾಖೆಯಿಂದ ಕ್ರಮ ವಹಿಸಲಾಗುತ್ತಿದೆ. |
| (ಈ) | ಈ ಜಿಲ್ಲೆಗಳಲ್ಲಿ ಹಲವಾರು ಮನೆ /ಕಟ್ಟಡಗಳು ಭೂ ಪರಿವರ್ತನೆ ಬಡಾವಣೆ /ನಿಯಮಗಳು ರಚನೆಯಾಗುವುದಕ್ಕಿಂತ ಮೊದಲೇ ಇದ್ದು ಕೆಲವು ಕಟ್ಟಡ/ಮನೆ ಮಾಲೀಕರು ತೀರಿಕೊಂಡಿದ್ದು ಅವುಗಳನ್ನು ಮ್ಯುಟೇಷನ್ ಮಾಡಲು ಪ್ರಾಯೋಗಿಕವಾಗಿ ಸಾಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮೃತರ ಹೆಸರಿನಲ್ಲಿರುವ ಕಟ್ಟಡಗಳಿಗೆ ತೆರಿಗೆಯನ್ನು ಪಾವತಿಸಲು ಅವಕಾಶವಿದೆಯೇ; | 1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರಲ್ಲಿ ಸೂಕ್ತ ದಾಖಲೆಗಳನ್ನಯ ಮ್ಯುಟೇಷನ್ ಮಾಡಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ.<br><br>2. ಮೃತರ ಹೆಸರಿನಲ್ಲಿರುವ ಕಟ್ಟಡಗಳಿಗೆ ಸಂಬಂಧಿಸಿದಂತೆ ನಿಯಮಗಳನ್ವಯ ಮ್ಯುಟೇಷನ್ ಮಾಡುವ ಮೂಲಕ ತೆರಿಗೆ ಸಂಗ್ರಹಿಸಬಹುದಾಗಿರುತ್ತದೆ. |
| (ಉ) | ಪ್ರಾದೇಶಿಕ ಭಿನ್ನತೆಗಳ ಕುರಿತು ಸಮಾಲೋಚಿಸದೆ, ಮಹಾಯೋಜನೆಯ ಅನುಪಸ್ಥಿತಿಯಲ್ಲಿ ಗ್ರಾಮ ಪಂಚಾಯಿತಿಗಳಿಗೆ ಪರಿಷ್ಕೃತ ನಿಯಮಗಳನ್ನು ತರಾತುರಿಯಲ್ಲಿ ಜಾರಿಗೊಳಿಸಿ ಸೃಷ್ಟಿಯಾದ ಸಮಸ್ಯೆಗಳನ್ನು ಹೇಗೆ ಪರಿಹರಿಸಲಾಗುವುದು? | 1. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025ರ ಕರಡು ನಿಯಮಗಳನ್ನು 04.07.2025ರಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ರಾಜ್ಯ ಪತ್ರಿಕೆಯಲ್ಲಿ ಪ್ರಕಟಿಸಿ, ಸದರಿ ನಿಯಮಗಳಿಂದ ಬಾಧಿತರಾಗಿರಬಹುದಾದ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಲಾಗಿರುತ್ತದೆ.<br><br>2. ಅದರಂತೆ, ಸ್ವೀಕರಿಸಲಾದ ಆಕ್ಷೇಪಣೆ ಮತ್ತು ಸಲಹೆಗಳನ್ನು ಇ-ಸ್ವತ್ತು ಸಲಹಾ ಸಮಿತಿಯಲ್ಲಿ ಚರ್ಚಿಸಲಾಗಿರುತ್ತದೆ.<br><br>3. ಅಂತಿಮವಾಗಿ ಈ ನಿಯಮಗಳನ್ನು ದಿನಾಂಕ:17.10.2025ರಂದು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ. |

**ಸಂಖ್ಯೆ:** ಗ್ರಾಅಪ 1024 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.